ಅಭ್ಯರ್ಥಿಗಳ ಹೆಸರು, ವಿಳಾಸ, ಜಾತಿ ಮತ್ತು ವಿದ್ಯಾರ್ಹತೆಗಳ ವಿವರಗಳನ್ನು ನಂತರ ಒದಗಿಸಲಾಗುವುದು.

ಆ) ವಿವರ ಪಡೆದು ಒದಗಿಸಲಾಗುವುದು.

ಇ) ನೇಮಕಾತಿ ಪ್ರಕಟಿಸಿದ ಪಟ್ಟಿಯಲ್ಲಿ ಇದ್ದ ಏಕೋಪಾಧ್ಯಾಯ ಶಾಲೆಗಳನ್ನು ಹೊರತು ಪಡಿಸಿ ಬೇರೆ ಶಾಲೆಗಳಿಗೆ ನೇಮಕಾತಿ ಆದೇಶ ನೀಡಲು ಬಾರದ ಕಾರಣ ಆದರಲ್ಲಿ ತೋರಿಸಿದ ಏಕೋಪಾಧ್ಯಾಯ ಶಾಲೆಗಳಿಗೆ ಮಾತ್ರ ನೇಮಕಾತಿ ಆದೇಶ ನೀಡಿದೆ.

ಬೆಳಗಾಂ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಕೊರತೆ

(2036): ಶ್ರೀ ಎಸ್.ಎಸ್. ಭೀಮಣ್ಣನವರ್ (ಚಿಕ್ಕೋಡಿ):–

ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾಂ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಶಿಕ್ಷಕರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ತುಂಬಲು ಸರ್ಕಾರ ಕೈಕೊಳ್ಳಲುದ್ದೇಶಿಸಿರುವ ಕ್ರಮಗಳೇನು ?

ಡಾ॥ ಹೆಚ್.ಡಿ. ಲಮಾಣಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಬೆಳಗಾಂ ಜಿಲ್ಲೆಯಲ್ಲಿ ಖಾಲಿಯಿರುವ 859 ಹುದ್ದೆಗಳ ಪೈಕಿ, 582 ಹುದ್ದೆಗಳನ್ನು ಸಾಮಾನ್ಯ ನೇಮಕಾತಿ ಮತ್ತು ವಿಶೇಷ ನೇಮಕಾತಿ ನಿಯಮಗಳನ್ವಯ ತುಂಬಲು ಕ್ರಮ ಜರುಗಿಸಲಾಗುತ್ತಿದೆ.

ಅಧ್ಯಕ್ಷರು:– ಇಲ್ಲಿಗೆ ಪ್ರಶ್ನೋತ್ತರಗಳು ಮುಗಿಯಿತು. ಈಗ ಲಿಖಿತ ಮೂಲಕ ಉತ್ತರಿಸಬೇಕಾದ ಪ್ರಶ್ನೋತ್ತರಗಳ ಪಟ್ಟಿಯನ್ನು ಮಂಡಿಸುವುದು.

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಹಾರನಹಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೇ, ದಿನಾಂಕ: 17-3-1993ರ ಲಿಖಿತ ಮೂಲಕ ಉತ್ತರಿಸುವ 21ನೇ ಪಟ್ಟಿಯಲ್ಲಿರುವ 62 ಪ್ರಶ್ನೆಗಳ ಪೈಕಿ, ಪ್ರಶ್ನೆಗಳ ಸಂಖ್ಯೆ: 2135, 1704, 1584, 1941, 13, 824, 1937, 1942, 1981, 2119, ಮತ್ತು 2122 ಪ್ರಶ್ನೆಗಳನ್ನು ಹೊರತುಪಡಿಸಿ ಇನ್ನು ಉಳಿದ 51 ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಸಂಬಂಧಪಟ್ಟ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಮೀನುಗಾರರಿಗೆ ಉಚಿತ ಮನೆ

(2063): ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ):–

ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?